**Bangalore**
**Regional News**
**09.08.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲು, ಹಳದಿ ಮೆಟ್ರೋ ಮಾರ್ಗಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಹಸಿರು ನಿಶಾನೆ
2. ಮತಗಳ್ಳತನ ; ಲೀಗಲ್ ಟೀಮ್‌ನಿಂದ ಪರಿಶೀಲನೆ - ಮುಖ್ಯಮಂತ್ರಿ ಸ್ಪಷ್ಟನೆ
3. ಪ್ರಧಾನಮಂತ್ರಿ ಇ-ಡ್ರೈವ್ ಯೋಜನೆ ; ಎರಡು ವರ್ಷ ವಿಸ್ತರಣೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ರಾಜ್ಯದ ಹಲವೆಡೆ ರಕ್ಷಾ ಬಂಧನ, ಋಗುಪಾಕರ್ಮ ಆಚರಣೆ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಬೆಳಗ್ಗೆ ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲನ್ನು ಕ್ರಾಂತಿವೀರ ಸಂಗೋಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಉದ್ಘಾಟಿಸಲಿದ್ದಾರೆ. ಆರ್.ವಿ. ರಸ್ತೆಯಿಂದ ಕೋನಪ್ಪನ ಆಗ್ರಹಾರಕ್ಕೆ ತೆರಳುವ ಹಳದಿ ಮೆಟ್ರೋ ಮಾರ್ಗಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಹಸಿರು ನಿಶಾನೆ ತೋರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಆರ್.ವಿ. ರಸ್ತೆಯಿಂದ ಬೊಮ್ಮಸಂದ್ರವರೆಗಿನ ಬೆಂಗಳೂರು ಮೆಟ್ರೋದ ಮೂರನೇ ಹಂತದ ರೈಲು ಮಾರ್ಗಕ್ಕೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಬಳಿಕ, ಪ್ರಧಾನಿಯವರು ಅಮೃತಸರ ಶ್ರೀಮಾತಾ ವೈಷ್ಣೋದೇವಿ ಕತ್ರಾ ರೈಲಿಗೆ ವರ್ಚುವಲ್ ಮೂಲಕ ಚಾಲನೆ ನೀಡಲಿದ್ದಾರೆ. ಪ್ರಧಾನಮಂತ್ರಿಯವರ ನಾಳಿನ ಪ್ರವಾಸದ ಹಿನ್ನೆಲೆಯಲ್ಲಿ ಕೇಂದ್ರ ರೈಲ್ವೆ, ಸಮಾಚಾರ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಇಂದು ರಾತ್ರಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಕಾರ್ಯಕ್ರಮದ ಪೂರ್ವ ತಯಾರಿಯ ಪರಿಶೀಲನೆ ನಡೆಸಲಿದ್ದಾರೆ.

<><><><>

ರಾಜ್ಯದ ಕೆಲವೆಡೆ ಉಂಟಾಗಿರುವ ಮತಗಳ್ಳತನ ವಿಚಾರದ ಬಗ್ಗೆ ಪರಿಶೀಲಿಸುವಂತೆ ಲೀಗಲ್ ಟೀಮ್‌ಗೆ ತಿಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನಲ್ಲಿ ಇಂದು ವಿವಿಧ ಕಾಮಗಾರಿಗಳ ಉದ್ಘಾಟನೆಗೆ ಆಗಮಿಸಿದ ಅವರು, ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಮಾಧ್ಯಮಗಳ ಮುಂದೆ ಕೇಂದ್ರ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತಗಳ್ಳತನವಾಗಿರುವ ಬಗ್ಗೆ ಪ್ರಸ್ತಾಪಿಸಿದ್ದಾರೆ. ಈ ಬಗ್ಗೆ ಪರಿಶೀಲನೆ

ನಡೆಸುವಂತೆ ಲೀಗಲ್ ಟೀಮ್‌ಗೆ ತಿಳಿಸಿದ್ದು, ಲೀಗಲ್ ಟೀಮ್ ಪರಿಶೀಲಿಸುತ್ತಿದೆ. ಲೀಗಲ್ ಟೀಮ್ ನೀಡುವ ಶಿಫಾರಸಿನ ಆಧಾರದ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಈ ಕೆಲಸವನ್ನು ತ್ವರಿತಗತಿಯಲ್ಲಿ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ೧೬ ಸ್ಥಾನ ಗೆಲ್ಲುವ ನಿರೀಕ್ಷೆ ಇತ್ತು ಹಾಗೂ ನಡೆಸಿದ್ದ ಸರ್ವೆ ಮಾಹಿತಿ ಸಹ ಇತ್ತು ಆದರೆ ಗೆಲುವು ಸಾಧಿಸಿದ್ದು, ಮಾತ್ರ ೯ ಸ್ಥಾನ, ಈ ಹಿನ್ನೆಲೆ ಮೊನ್ನೆ ರಾಹುಲ್ ಗಾಂಧಿ ಹೇಳಿರುವ ಎಲ್ಲಾ ಮಾಹಿತಿಗಳು ಚುನಾವಣೆ ಆಯೋಗದಿಂದಲೇ ದೊರೆತಿದೆ. ಚುನಾವಣಾ ಆಯೋಗದ ದಾಖಲಾತಿಗಳನ್ನೇ ರಾಹುಲ್ ಗಾಂಧಿ ಪ್ರಸ್ತಾಪ ಮಾಡಿದ್ದಾರೆ. ಲೋಕಸಭಾ ಕ್ಷೇತ್ರವೊಂದರಲ್ಲಿ ಒಂದೇ ರೂಮ್‌ನಲ್ಲಿರುವ ೮೦ ಮಂದಿ ವೋಟ್ ಮಾಡಿದ್ದಾರೆ. ಒಂದೇ ರೂಮ್ ನಲ್ಲಿ ೮೦ ಮಂದಿ ವಾಸವಿರಲು ಸಾಧ್ಯವೇ? ಹೀಗಾಗಿ ಮತಗಳ್ಳತನವಾಗಿದೆ ಎಂದು ಅವರು ಆರೋಪಿಸಿದ್ದಾರೆ. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವರಾದ ಡಾ. ಹೆಚ್ ಸಿ ಮಹದೇವಪ್ಪ, ಕೆ ವೆಂಕಟೇಶ್ ಹಾಗೂ ಶಾಸಕರುಗಳು ಉಪಸ್ಥಿತರಿದ್ದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷಿ ಪಿಎಂ ಇ-ಡ್ರೈವ್ ಯೋಜನೆಯ ಅವಧಿಯನ್ನು ೨ ವರ್ಷಗಳ ಕಾಲ ವಿಸ್ತರಿಸಲಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ೨೦೨೬ ಮಾರ್ಚ್ ೩೧ ರಿಂದ ೨೦೨೮ ಮಾರ್ಚ್ ೩೧ರವರೆಗೆ ಯೋಜನೆಯನ್ನು ವಿಸ್ತರಿಸಲಾಗಿದೆ. ನವೀನ ವಾಹನ ಸಂವರ್ಧನೆಯಲ್ಲಿ ಪಿಎಂ ಇ-ಡ್ರೈವ್ ಯೋಜನೆಯ ಅವಧಿಯನ್ನು ಎರಡು ವರ್ಷದಿಂದ ನಾಲ್ಕು ವರ್ಷಗಳಿಗೆ ವಿಸ್ತರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ೨೦೨೪ ಸೆಪ್ಟೆಂಬರ್ ೨೯ ರಂದು ಎರಡು ವರ್ಷಗಳ ಅವಧಿಗೆ ೧೦ ಸಾವಿರದ ೯೦೦ ಕೋಟಿ ರೂಪಾಯಿ ವೆಚ್ಚದೊಂದಿಗೆ ಈ ಯೋಜನೆಯ ಅಧಿಸೂಚನೆ ಹೊರಡಿಸಲಾಗಿತ್ತು. ಈಗ ಈ ಯೋಜನೆಯನ್ನು ೨೦೨೮ರವರೆಗೆ ವಿಸ್ತರಿಸಲಾಗಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತದಲ್ಲಿ ಇ-ಚಲನಶೀಲತೆಯನ್ನು ವೇಗಗೊಳಿಸುವತ್ತ ದೇಶವು ತ್ವರಿತಗತಿಯಲ್ಲಿ ಹೆಜ್ಜೆ ಇಡುತ್ತಿದೆ ಎಂದು ಸಚಿವ ಕುಮಾರಸ್ವಾಮಿ ಅವರು ತಿಳಿಸಿದ್ದು,  ಪಿಎಂ ಇ-ಡ್ರೈವ್ ಯೋಜನೆಯು ತನ್ನ ಹಂತ ಹಂತದ ಉತ್ಪಾದನಾ ಕಾರ್ಯಕ್ರಮದ ಮೂಲಕ ಮೇಕ್ ಇನ್ ಇಂಡಿಯಾವನ್ನು ಸಕ್ರಿಯಗೊಳಿಸುತ್ತದೆ ಎಂದಿದ್ದಾರೆ. ಇ-ಟ್ರಕ್‌ಗಳ ಮಾರುಕಟ್ಟೆ ಆರಂಭಿಕ ಹಂತದಲ್ಲಿದ್ದು, ಈ ದೃಷ್ಟಿಯಿಂದ ಪೂರ್ಣ ಪ್ರಮಾಣದ ವಾಣಿಜ್ಯ ಉತ್ಪಾದನೆಗೆ ಇನ್ನೂ ಸ್ವಲ್ಪ ಸಮಯ ತೆಗೆದುಕೊಳ್ಳುವ ಸಾಧ್ಯತೆಯಿದೆ ಎಂದು ಸಚಿವರು ತಿಳಿಸಿದ್ದಾರೆ.

<><><>

ಸಹೋದರ ಸಹೋದರಿಯರ ನಡುವಣ  ಪವಿತ್ರ ಬಾಂಧವ್ಯದ ಸಂಭ್ರಮಾಚರಣೆಯ ರಕ್ಷಾ ಬಂಧನವನ್ನು ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಶ್ರಾವಣ ಪೌರ್ಣಮಿಯಂದು ಋಗುಪಾಕರ್ಮ ಆಚರಣೆಯನ್ನು ಶ್ರದ್ಧಾಳುಗಳು, ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಹೊಸ ಜನಿವಾರ ಧರಿಸುವ ಮೂಲಕ ಆಚರಿಸಿದರು. ಉತ್ತರಕನ್ನಡ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳದಲ್ಲಿ ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಸಹಯೋಗದಲ್ಲಿ ಮುಂಡಗೋಡ ತಾಲೂಕಿನ ಮಳಗಿ ಗ್ರಾಮ ಪಂಚಾಯಿತಿಯಲ್ಲಿ ರಕ್ಷಾ ಬಂಧನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಕಾಯಕ ಯೋಗಿ ಶಿವಶರಣ ನುಲಿಯ ಚಂದಯ್ಯ ಜಯಂತಿಯನ್ನು ಆಚರಿಸಲಾಯಿತು. ನುಲಿಯ ಚಂದಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಶಾಸಕ ಧೀರಜ್ ಮುನಿರಾಜು ಮಾತನಾಡಿ,  ನುಲಿಯ ಚಂದಯ್ಯ ವಚನಕಾರರಾಗಿ ಸಮಾಜದ ಅಂಕುಡೊಂಕುಗಳನ್ನು ತಿದ್ದಲು ಶ್ರಮಿಸಿದರು. ಕಾಯಕಯೋಗಿಯಾಗಿ ಕಾಯಕದ ಮಹತ್ವವನ್ನು ಸಾರಿದವರು ಎಂದು ಸ್ಮರಿಸಿದರು. ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಮೊದಲಾದವರು ಹಾಜರಿದ್ದರು.

<><><><>

ಧಾರವಾಡ ಜಿಲ್ಲೆಯ  ನವಲಗುಂದ ಶ್ರೀ ಶಂಕರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಂಯುಕ್ತ ಆಶ್ರಯದಲ್ಲಿ ಇಲಕಲ್ಲ ಡಾ. ಮಹಾಂತ ಅಪ್ಪಗಳ ಜನ್ಮದಿನದ ನಿಮಿತ್ತ ಆಯೋಜಿಸಿದ್ದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮವನ್ನು  ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಉದ್ಘಾಟಿಸಿದರು. ಬಳಿಕ ಮಾತನಾಡಿ, ಅತಿ ಹೆಚ್ಚು ಜನ ಯುವಕರೇ ಇಂತಹ ಚಟಗಳಿಗೆ ಬಲಿಯಾಗುತ್ತಿದ್ದಾರೆ, ವ್ಯಸನಿಗಳಾಗುತ್ತಿದ್ದಾರೆ. ವ್ಯಸನಿಗಳು ಆಗುವುದಕ್ಕೂ ಮುಂಚೆ ಅದರಿಂದಾಗುವ ಪರಿಣಾಮಗಳನ್ನು ತಿಳಿದುಕೊಳ್ಳುವುದು ಅತಿಮುಖ್ಯ ಎಂದು ಹೇಳಿದರು.

<><><><>

ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ವಿದ್ಯುತ್ ದೀಪಾಲಂಕಾರವನ್ನು ಈ ಬಾರಿ ಹೊಸ ವಿನ್ಯಾಸಗಳ ಜತೆಗೆ ಸುರಕ್ಷತೆಗೆ ಆದ್ಯತೆ ನೀಡುವ ಮೂಲಕ ಆಕರ್ಷಣೀಯವಾಗಿಸಲು ಆಸಕ್ತಿವಹಿಸಿ ಕೆಲಸ ಮಾಡಿ ಎಂದು ಅಧಿಕಾರಿಗಳು ಹಾಗೂ ದೀಪಾಲಂಕಾರ ಮಾಡುವ ವಿದ್ಯುತ್ ಗುತ್ತಿಗೆದಾರರಿಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಮುನಿಗೋಪಾಲ್ ರಾಜು ಸಲಹೆ ನೀಡಿದ್ದಾರೆ. ನಿಗಮದ ಪ್ರಧಾನ ಕಚೇರಿಯಲ್ಲಿ ಈ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ದಸರಾ ಮಹೋತ್ಸವದ

ಸಂದರ್ಭದಲ್ಲಿ ಮಾಡಲಾಗುವ ವಿದ್ಯುತ್ ದೀಪಾಲಂಕಾರ ಎಲ್ಲರ ಗಮನ ಸೆಳೆಯಲಿದೆ. ಹೀಗಾಗಿ ಈ ಬಾರಿಯ ವಿದ್ಯುತ್ ದೀಪಾಲಂಕಾರವನ್ನು ಕಳೆದ ವರ್ಷಕ್ಕಿಂತ ಹೆಚ್ಚು ಆಕರ್ಷಕವಾಗಿ ಮಾಡಲು ದಸರಾ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಈ ನಿಟ್ಟಿನಲ್ಲಿ ನಿಗಮದ ವತಿಯಿಂದ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ದಾವಣಗೆರೆಯಲ್ಲಿಂದು ಹುತಾತ್ಮರ ಸ್ಮಾರಕದ ಎದುರು ಬಲಿದಾನ ದಿವಸ ಅಂಗವಾಗಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ೧೯೩೪ ರ ಮಾರ್ಚ್ ೨ ರಂದು ಮಹಾತ್ಮ ಗಾಂಧೀಜಿ ದಾವಣಗೆರೆಗೆ ಭೇಟಿ ನೀಡಿದ ಮೇಲೆ ಇಲ್ಲಿನ ಸ್ವಾತಂತ್ರ್ಯ ಚಳುವಳಿ ಹುರುಪು ಪಡೆಯಿತು. ನಂತರ ಅವರು ಕರೆ ನೀಡಿದ್ದ ಬ್ರಿಟಿಷರೆ ಭಾರತ ಬಿಟ್ಟು ತೊಲಗಿ' ಆಂದೋಲನಕ್ಕೆ ಕಿವಿಗೊಟ್ಟು ಕ್ರಾಂತಿಕಾರಿ ಹೋರಾಟಕ್ಕೆ ಧುಮುಕಿದ ಯುವಕರ ಮೇಲೆ ೧೯೪೨ ರ ಆಗಸ್ಟ್ ೯ ರಂದು ಗುಂಡಿನ ಸುರಿಮಳೆ ಗೈಯಲಾಯಿತು. ಈ ಸಂದರ್ಭದಲ್ಲಿ ಹಳ್ಳೂರು ನಾಗಪ್ಪ, ಅಕ್ಕಸಾಲಿ ವಿರೂಪಾಕ್ಷಪ್ಪ, ಬಿದರಕುಂದಿ ನಿಂಗಪ್ಪ, ಹದಡಿ ನಿಂಗಪ್ಪ ಹಮಾಲಿ ತಿಮ್ಮಣ್ಣ, ಮಾಗಾನಹಳ್ಳಿ ಹನುಮಂತಪ್ಪ ಸೇರಿದಂತೆ ೬ ಜನರು ಬಲಿಯಾದರು. ಈ ನೆನಪಿನಲ್ಲಿ ಬಲಿದಾನ ದಿವಸವನ್ನು ಆಚರಿಸಲಾಗುತ್ತಿದೆ. ಮಧ್ಯ ಕರ್ನಾಟಕದ ದಾವಣಗೆರೆಯಲ್ಲಿ ನಡೆದ ಸ್ವಾತಂತ್ರ್ಯ ಹೋರಾಟದ ಹಾದಿಯ ರೋಚಕತೆಯನ್ನು ದಾವಣಗೆರೆ ವಿಶ್ವವಿದ್ಯಾಲಯದ ನಿವೃತ್ತ ಪ್ರೊಫೆಸರ್ ಡಾ.ಬಿ.ಬಕ್ಕಪ್ಪ ಹೀಗೆ ಬಣ್ಣಿಸುತ್ತಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>